ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತೆಂಟನೆಯ ಅಧಿವೇಶನ

## ಮಂಗಳವಾರ, ದಿನಾಂಕ : 23ನೇ ಜುಲೈ, 2019

ಶಿವಮೊಗ್ಗ ಹಾಗೂ ದಾವಣಗೆರೆ ಜಿಲ್ಲೆಯಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳ ಕುರಿತು

ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :-

525 (517) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಇದುವರೆಗೂ ಶಿವಮೊಗ್ಗ ಹಾಗೂ ದಾವಣಗೆರೆ ಜಿಲ್ಲೆ ಹೊನ್ನಾಳಿ ಮತ್ತು ಚನ್ನಗಿರಿ ತಾಲ್ಲೂಕುಗಳಲ್ಲಿ ಮಂಜೂರು ಆಗಿರುವ ಶುದ್ಧ ಕುಡಿಯುವ ನೀರಿನ ಘಟಕಗಳ ಸಂಖ್ಯೆ ಎಷ್ಟು; ಕಾರ್ಯಾರಂಭ ಮಾಡಿರುವ ಘಟಕಗಳ ಸಂಖ್ಯೆ ಎಷ್ಟು; ನಿರ್ಮಾಣ ಹಂತದಲ್ಲಿರುವ ಘಟಕಗಳ ಸಂಖ್ಯೆ ಎಷ್ಟು; ಹಾಗೂ ಸದರಿ ಘಟಕಗಳಿಗೆ ಬಿಡುಗಡೆಯಾಗಿರುವ ಮತ್ತು ಖರ್ಚಾದ ಹಾಗೂ ಬಾಕಿ ಇರುವ ಅನುದಾನವೆಷ್ಟು ; (ತಾಲ್ಲೂಕುವಾರು, ಗ್ರಾಮ ಪಂಚಾಯಿತಿವಾರು, ಗ್ರಾಮವಾರು ಪ್ರತಿ ಘಟಕದ ವಿವರ ನೀಡುವುದು)

(ಆ) ಶಿವಮೊಗ್ಗ ಜಿಲ್ಲೆಯ ಗ್ರಾಮೀಣ ಪ್ರದೇಶದಲ್ಲಿ ಶುದ್ಧ ಕುಡಿಯುವ ನೀರಿನ ಘಟಕ ಯೋಜನೆಯಲ್ಲಿ ಎಷ್ಟು ಘಟಕಗಳನ್ನು ಮಂಜೂರು ಮಾಡಲಾಗಿದೆ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಇದುವರೆಗೂ ಎಷ್ಟು ಘಟಕಗಳನ್ನು ಸ್ಥಾಪಿಸಲಾಗಿದೆ; ಈ ಘಟಕಗಳಿಗೆ ಬಿಡುಗಡೆಯಾದ ಹಣವೆಷ್ಟು ;

(ಈ) ಇನ್ನುಳಿದ ಘಟಕಗಳ ಸ್ಥಾಪನೆಗೆ ಹಣ ಬಿಡುಗಡೆ ಮಾಡಲಾಗಿದೆಯೇ; ಈ ಘಟಕಗಳನ್ನು ಸ್ಥಾಪಿಸಲು ಬೇಕಾಗುವ ಕಾಲಾವಧಿ ಏನು ;

(ಉ) ಈಗಾಗಲೇ ನಿರ್ಮಿಸಿರುವ ಶುದ್ಧ ಕುಡಿಯುವ ನೀರಿನ ಘಟಕಗಲ್ಲಿ ದುರಸ್ಥಿಗೆ ಎಷ್ಟು ಘಟಕಗಳು ಬಂದಿರುತ್ತವೆ; ಸಂಪೂರ್ಣ ಹಾಳಾಗಿರುವ ಘಟಕಗಳ ಸಂಖ್ಯೆ ಎಷ್ಟು; ದುರಸ್ಥಿಗೆ ಕ್ರಮ ಕೈಗೊಳ್ಳಲು ಪ್ರತ್ಯೇಕ ಜಿಲ್ಲಾವಾರು ಘಟಕಗಳನ್ನು ರಚಿಸಲಾಗಿದೆಯೇ ?